**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ರವರ ನ್ಯಾಯಾಲಯ, ಚಳ್ಳಕೆರೆ.**

# ಸಿ.ಸಿ. ನಂ.2126/2021

ಪ್ರಮಾಣ ವಚನ ಬೋಧಿಸಲಾಯಿತು.

| | | | |
|---|---|---|---|
| ಹೆಸರು | : | ಕುಶ | ಸಿಡಬ್ಲ್ಯೂ -10 |
| ತಂದೆ ಹೆಸರು | : | ಚಿನ್ನಯ್ಯ | ಪಿ ಡಬ್ಲ್ಯೂ- 04 |
| ವಯಸ್ಸು | : | 39 ವರ್ಷ | |
| ಉದ್ಯೋಗ | : | ವ್ಯವಸಾಯ | |
| ವಾಸಸ್ಥಳ | : | ವರವು ಗ್ರಾಮ | ದಿ:11-06-2025. |

## ಮುಖ್ಯ ವಿಚಾರಣೆ: ಮಾನ್ಯ ಎ.ಪಿ.ಪಿ. ರವರಿಂದ:

ಸಾಕ್ಷಿಗೆ ವಾಹನ ಪರಿಶೀಲನೆ ಪಂಚನಾಮೆಯನ್ನು ತೋರಿಸಲಾಗಿ ಸದರಿ ದಾಖಲೆಯಲ್ಲಿರುವ ತನ್ನಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ವಾಹನ ಪರಿಶೀಲನಾ ಪಂಚನಾಮೆಯನ್ನು ನಿಪಿ.12 ಅಂತ , ಸಾಕ್ಷಿಯ ಸಹಿಯನ್ನು ನಿಪಿ.12(ಎ) ಅಂತ ಗುರುತಿಸಲಾಯಿತು. ಈಗ 4-5 ವರ್ಷಗಳ ಹಿಂದೆ ಚಳ್ಳಕೆರೆ ಪೊಲೀಸ್ ಠಾಣೆಯಲ್ಲಿ ನಿಪಿ.12 ಕ್ಕೆ ಸಹಿ ಮಾಡಿರುತ್ತೇನೆ. ಯಾವ ವಿಚಾರಕ್ಕೆ ಸಹಿ ಪಡೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿರುವುದಿಲ್ಲ ಮತ್ತು ಯಾವುದೇ ವಾಹನವನ್ನು ಜಪ್ತು ಪಡಿಸಿಕೊಂಡಿರುವುದಿಲ್ಲ. ನನ್ನನ್ನು ಹೊರತು ಪಡಿಸಿ ನಿಪಿ.12 ಕ್ಕೆ ಬೇರೆ ಯಾರು ಸಹಿ ಮಾಡಿರುವುದಿಲ್ಲ. **(ಈ ಹಂತದಲ್ಲಿ ಸಹಾಯಕ ಸರ್ಕಾರಿ ಅಭಿಯೋಜಕರು, ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗಾಗಿ ಅನುಮತಿ ಕೋರಿರುತ್ತಾರೆ, ಸಾಕ್ಷಿಯ ಹೇಳಿಕೆ ಹಾಗೂ ದಾಖಲೆಗಳನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು)**

## ಪಾಟೀ ಸವಾಲು ಮಾನ್ಯ ಎ.ಪಿ.ಪಿ. ರವರಿಂದ:

ದಿ: 24.12.2019 ರಂದು ಚಳ್ಳಕೆರೆ ಪೊಲೀಸ್ ಠಾಣಾ ಆವರಣದಲ್ಲಿ ಅಪಘಾತ ಪಡಿಸಿದ ಕೆಎ-16 ಇಸಿ-8182 ನೇ ಮೋಟಾರ್ ಸೈಕಲ್ಲನ್ನು ನನ್ನ ಹಾಗೂ ಚಾಸಾ-11 ರವರ ಸಮಕ್ಷಮ ಬೆಳಿಗ್ಗೆ 10.30 ರಿಂದ 11.15 ರವರೆಗೆ ನಿಪಿ.12 ರಂತೆ ಪಂಚನಾಮೆ ಕ್ರಮ ಜರುಗಿಸಿ ವಾಹನವನ್ನು ಜಪ್ತು ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಎಲ್ಲಾ ವಿಚಾರ ಗೊತ್ತಿದ್ದರೂ ಸಹಾ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ ಶ್ರೀ ಸಿ.ವಿ. ಆರೋಪಿಯ ಪರ ವಕೀಲರಿಂದಃ</u>**

ಆರೋಪಿಯ ಪರ ವಕೀಲರು ಪಾಟೀ ಸವಾಲು ಇರುವುದಿಲ್ಲ ಎಂದು ನುಡಿದ ಕಾರಣ ಸದರಿ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ಮರು ವಿಚಾರಣೆಃ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ.ಹೇ.ಕೇ.ಸರಿಯಿದೆ,

ಪ್ರಧಾನ ಸಿವಿಲ್ ಮತ್ತು ಜೆ.ಎಂ.ಎಫ್.ಸಿ.,
ನ್ಯಾಯಾಧೀಶರು, ಚಳ್ಳಕೆರೆ